ಉಪಾಧ್ಯಕ್ಷಿಣಿಯವರು : ಪ್ರಸ್ತಾವ ಏನಂದರೆ 'ಖಂಡ 20 ರಿಂದ 27 ರವರೆಗೆ ಎರಡೂ ಸೇರಿದಂತೆ ವಿಧೇಯಕದ ಅಂಗವಾಗಿರುತ್ತದೆ'

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಖಂಡ 20 ರಿಂದ 27 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಖಂಡ 1 ಇತ್ಯಾದಿ

ಉಪಾಧ್ಯಕ್ಷಿಣಿಯವರು : ಪ್ರಸ್ತಾವ ಏನೆಂದರೆ " ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀಮತಿ ಕೆ.ಎಸ್. ನಾಗರತ್ನಮ್ಮ : (ಯೋಜನೆ, ಪ್ರಾಂಶ್ಥಿಕ ಹಣಕಾಸು ಮತ್ತು ಸಾಂಖ್ಯಿಕ ಸಚಿವರು) ಮಾನ್ಯ ಉಪಾಧ್ಯಕ್ಷಿಣಿಯವರೇ 1991ನೇ ಸಾಲಿನ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಲಿ ವಿಧೇಯಕವನ್ನು ತಿದ್ದುಪಡಿಯಾಗಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷಿಣಿಯವರು : ಪ್ರಸ್ತಾವ ಏನೆಂದರೆ "1991ನೇ ಸಾಲಿನ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು 1991ನೇ ಸಾಲಿನ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವಿಧೇಯಕಕ್ಕೆ ತಿದ್ದುಪಡಿಯಾಗಿರುವ ರೂಪದಲ್ಲಿ ಒಪ್ಪಿಗೆ ನೀಡಲಾಯಿತು.

ಪ್ರಕಟಣೆ

ಮಾನ್ಯ ಉಪಾಧ್ಯಕ್ಷಿಣಿಯವರು;

ಈ ದಿನ ಈ ಕೆಳಕಂಡ ವ್ಯಕ್ತಿಗಳು ಪ್ರೇಕ್ಷಕರ ವೇದಿಕೆಯಿಂದ ಘೋಷಣೆ ಕೂಗಿ ಕರಪತ್ರಗಳನ್ನು ಎಸೆದಿರುತ್ತಾರೆ.

ಶ್ರೀಯುತರುಗಳಾದ

1) ಮೋಹನ್, 22 ವರ್ಷ

2) ರಾಜು, 22 ವರ್ಷ

3) ಶಿವರಾಜು, 23 ವರ್ಷ

ಈ ಮೇಲ್ಕಂಡ ವ್ಯಕ್ತಿಗಳು ಪ್ರೇಕ್ಷಕರ ವೇದಿಕೆಯಲ್ಲಿ ಅವಿವೇಕ ವರ್ತನೆಯಿಂದ ಘೋಷಣೆಯನ್ನು ಕೂಗುತ್ತಾ ಕರಪತ್ರಗಳನ್ನು ಎಸೆದಿದ್ದಕ್ಕಾಗಿ ಪಹರೆ ಮತ್ತು ನಿಗಾವಣೆ ಸಿಬ್ಬಂದಿಯವರು ತಮ್ಮ ವಶಕ್ಕೆ ತೆಗೆದುಕೊಂಡಿದ್ದಾರೆ. ಈ ವ್ಯಕ್ತಿಗಳಿಗೆ ಮಾನ್ಯ ಸದಸ್ಯರಾದ ಶ್ರೀ ಎಂ.ಪಿ. ವೆಂಕಟೇಶ್ ಹಾಗೂ ಶ್ರೀ ಎಂ.ಪಿ. ಕೇಶವಮೂರ್ತಿಯವರುಗಳು

ಪ್ರವೇಶ ಪತ್ರವನ್ನು ನೀಡಲು ಶಿಫಾರಸ್ಸು ಮಾಡಿರುವುದು ದಾಖಲೆಗಳಿಂದ ತಿಳಿದು ಬರುತ್ತದೆ.

ಪ್ರೇಕ್ಷಕರ ವೇದಿಕೆಯ ನಿಯಮಗಳ ಉಲ್ಲಂಘನೆ ಅಥವಾ ಅಸಭ್ಯ ವರ್ತನೆ ಸಭಾನಿಂದನೆಯಾಗುವುದರಿಂದ ಈ ತಪ್ಪಿಗಾಗಿ ಜೈಲು ಶಿಕ್ಷೆ ವಿಧಿಸಬಹುದಾಗಿದೆ.

ಆದರೆ ಉಭಯ ಸದನದ ಮಾನ್ಯ ಸದಸ್ಯರುಗಳು ಇನ್ನು ಮುಂದೆ ಪ್ರೇಕ್ಷಕರ ವೇದಿಕೆಗೆ ಪ್ರವೇಶ ಪತ್ರಗಳನ್ನು ನೀಡಲು ಶಿಫಾರಸ್ಸು ಮಾಡುವ ಮುನ್ನ ಅಂತಹ ವ್ಯಕ್ತಿಗಳ ನಡವಳಿಕೆಯನ್ನು ಅರಿತು ಹಾಗೂ ಪ್ರೇಕ್ಷಕರ ವೇದಿಕೆಯಲ್ಲಿ ಸಭ್ಯ ರೀತಿಯಲ್ಲಿ ವರ್ತಿಸಲು ತಿಳುವಳಿಕೆ ನೀಡಬೇಕೆಂದು ಕೋರುತ್ತೇನೆ.

ಇನ್ನು ಮುಂದೆ ಇಂತಹ ಘಟನೆಗಳು ಮರುಕಳಿಸಿದ ಪಕ್ಷದಲ್ಲಿ ಗಂಭೀರವಾಗಿ ಪರಿಗಣಿಸಿ ಅವರಿಗೆ ಉಗ್ರ ಶಿಕ್ಷೆ ವಿಧಿಸಲಾಗುವುದು.

ಮೇಲ್ಕಂಡ ವ್ಯಕ್ತಿಗಳನ್ನು ಪಹರೆ ಹಾಗೂ ನಿಗಾವಣೆ ಪಡೆಯವರು ಈ ದಿನದ ಸಭೆ ಮುಗಿಯುವವರೆಗೂ ತಮ್ಮ ವಶದಲ್ಲಿಟ್ಟುಕೊಂಡಿದ್ದು, ಸದನದ ಕಲಾಪಗಳು ಮುಗಿದ ನಂತರ ಅವರಿಗೆ ತೀವ್ರವಾದ ಎಚ್ಚರಿಕೆಯನ್ನು ನೀಡಿ ಬಿಡುಗಡೆ ಮಾಡಲಾಗುವುದು.

ಈಗ, ಬಿಸ್‌ನೆಸ್ ಅಡ್ವೈಸರಿ ಕಮಿಟಿ ತೀರ್ಮಾನದ ಪ್ರಕಾರ ಈ ದಿವಸ ಸಭೆ ಕೊನೆಗಾಣಬೇಕಾಗಿತ್ತು. ನಾಳೆ ದಿವಸವೂ ಈ ಅಧಿವೇಶನವನ್ನು ಮುಂದುವರಿಸಲಿಕ್ಕೆ ತಮ್ಮ ಅಭಿಪ್ರಾಯವನ್ನು ಕೇಳುತ್ತೇನೆ.

ಶ್ರೀ ಹೆಚ್. ವಿಕಾಂತಯ್ಯ : ಈಗ ಸಭೆಯ ಕಲಾಪಗಳನ್ನು ಮುಂದೂಡಿ ನಾಳೆ ಬೆಳಿಗ್ಗೆ ಸೇರಬಹುದು.

ಉಪಾಧ್ಯಕ್ಷಿಣಿಯವರು : ಈಗ ಸಭೆಯು ಮುಂದುವರಿದು ನಾಳೆ ಬೆಳಿಗ್ಗೆ 10 ಗಂಟೆಗೆ ಸಮಾವೇಶಗೊಳ್ಳುತ್ತದೆ.

(ಸದನವು 8 ಗಂಟೆ 6 ನಿಮಿಷಕ್ಕೆ ಮುಕ್ತಾಯಗೊಂಡು ಮರುದಿನ ಬೆಳಿಗ್ಗೆ 10 ಗಂಟೆಗೆ ಸಮಾವೇಶಗೊಳ್ಳಲು ನಿಶ್ಚಯಿಸಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)